ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

958 (1044) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; ಈ ಜಿಲ್ಲೆಗೆ ಅಗತ್ಯವಿರುವಷ್ಟು ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆಯೇ ; (ಅವುಗಳ ವಿವರವನ್ನು ತಾಲ್ಲೂಕುವಾರು ನೀಡುವುದು)

(ಆ) ಈ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಕಳೆದ 3 ವರ್ಷಗಳಲ್ಲಿ ಸ್ವೀಕೃತವಾದ ಅರ್ಜಿಗಳೆಷ್ಟು ; ಇದರಲ್ಲಿ ಆಯ್ಕೆಯಾದ ಅರ್ಜಿಗಳೆಷ್ಟು; ಮತ್ತು ವಿದ್ಯಾರ್ಥಿನಿಲಯಕ್ಕೆ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿದ್ಯಾರ್ಥಿನಿಲಯವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಈ ವಿದ್ಯಾರ್ಥಿನಿಲಯಗಳ ನಿರ್ವಹಣೆಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಮತ್ತು ಖರ್ಚಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲೆಗೆ ಅಗತ್ಯವಿರುವಷ್ಟು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆಯೇ; ಇಲ್ಲವಾದಲ್ಲಿ ಇನ್ನೂ ಎಷ್ಟು ವಿದ್ಯಾರ್ಥಿನಿಲಯಗಳ ಅವಶ್ಯಕತೆಯಿದೆ; ಅವಶ್ಯಕತೆ ಇರುವ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?